# ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:** ಶ್ರೀ ಸಚಿನ್ ಕುಮಾರ್ ಟಿ.ಎಸ್. ಕೆಹೆಚ್‌ಬಿ 13/ಬಿ, ಜ.ಜೆ.ಕಾಲೋನಿ, ಭದ್ರಾವತಿ ತಾಲ್ಲೂಕು, ಶಿವಮೊಗ್ಗ ಜಿಲ್ಲೆ ಇವರನ್ನು ಮಾನ್ಯ ಉಪಾಧ್ಯಕ್ಷರು, ರಾಜ್ಯ ಯೋಜನಾ ಮಂಡಳಿ ಇವರ ಆಪ್ತ ಶಾಖೆಯಲ್ಲಿ ಖಾಲಿ ಇರುವ ಆಪ್ತ ಸಹಾಯಕ ಹುದ್ದೆಗೆ ಗುತ್ತಿಗೆ ಆಧಾರದ ಮೇಲೆ (ತಾತ್ಕಾಲಿಕ) ನೇಮಕಾತಿ ಮಾಡುವ ಬಗ್ಗೆ.

ಓದಲಾಗಿದೆ:

1) ಅಧಿಸೂಚನೆ ಸಂಖ್ಯೆ:ಸಿಆಸುಇ 45 ಸಿಎಸ್‌ಸಿ 2014 ದಿನಾಂಕ:13.06.2014.
2) ಅಧಿಸೂಚನೆ ಸಂಖ್ಯೆ:ಸಿಆಸುಇ 78 ಸಿಸನೇ 2014 ದಿನಾಂಕ:16.06.2014.
3) ಸರ್ಕಾರಿ ಆದೇಶ ಸಂಖ್ಯೆ:ಸಿಆಸುಇ 125 ಸಿಸನೇ 2002 ದಿನಾಂಕ:27.11.2002.
4) ಅಧಿಕೃತ ಜ್ಞಾಪನ ಸಂಖ್ಯೆ:ಸಿಆಸುಇ 237 ಸಿಸನೇ 2012 ದಿನಾಂಕ:27.07.2012
5) ಮಾನ್ಯ ಉಪಾಧ್ಯಕ್ಷರ ಟಿಪ್ಪಣಿ ಸಂಖ್ಯೆ: KSPB/STF-03/515/015, ದಿನಾಂಕ:29.09.2016

ಪ್ರಸ್ತಾವನೆ:

ಶ್ರೀ. ಸಿ.ಎಂ. ಇಬ್ರಾಹಿಂ, ಮಾನ್ಯ ಮಾಜಿ ಸಚಿವರು, ಇವರನ್ನು ರಾಜ್ಯ ಯೋಜನಾ ಮಂಡಳಿಯ ಉಪಾಧ್ಯಕ್ಷರನ್ನಾಗಿ ಮೇಲೆ ಕ್ರಮ ಸಂಖ್ಯೆ (1) ರಲ್ಲಿ ಓದಲಾದ ಅಧಿಸೂಚನೆಯಲ್ಲಿ ನೇಮಕಾತಿ ಮಾಡಲಾಗಿದೆ ಹಾಗೂ ಮೇಲೆ ಕ್ರಮ ಸಂಖ್ಯೆ (2) ರಲ್ಲಿ ಓದಲಾದ ಅಧಿಸೂಚನೆಯಲ್ಲಿ ಇವರಿಗೆ ಸಂಪುಟ ದರ್ಜೆ ಸಚಿವರ ಸ್ಥಾನಮಾನವನ್ನು ನೀಡಲಾಗಿದೆ. ರಾಜ್ಯ ಯೋಜನಾ ಮಂಡಳಿಯ ಉಪಾಧ್ಯಕ್ಷರ ಆಪ್ತ ಶಾಖೆಗೆ 12 ವಿವಿಧ ದರ್ಜೆಯ ಹುದ್ದೆಗಳನ್ನು ನಿಯೋಜನೆ/ಗುತ್ತಿಗೆ ಆಧಾರದ ಮೇಲೆ ನೇಮಕಾತಿ ಮಾಡಿಕೊಳ್ಳಲು ಮೇಲೆ ಕ್ರಮ ಸಂಖ್ಯೆ (3) ರಲ್ಲಿ ಓದಲಾದ ಸರ್ಕಾರಿ ಆದೇಶದಲ್ಲಿ ಅನುಮತಿ ನೀಡಲಾಗಿದೆ.

ಮಾನ್ಯ ಮುಖ್ಯಮಂತ್ರಿಯವರ ಸಚಿವಾಲಯ / ಸಚಿವರ / ವಿಧಾನ ಸಭೆ / ವಿಧಾನ ಪರಿಷತ್ತು / ರಾಜ್ಯ ಸಭೆ / ಲೋಕ ಸಭೆ ಸದಸ್ಯರ ಸಚಿವರ ಸ್ಥಾನಮಾನ ಪಡೆದ ಪ್ರಾಧಿಕಾರಗಳ ಆಪ್ತ ಸಿಬ್ಬಂದಿ ಶಾಖೆಗಳಲ್ಲಿ ಮತ್ತು ಕೆಲವು ಆಯೋಗಗಳಲ್ಲಿ ಗುತ್ತಿಗೆ ಆಧಾರದ ಮೇಲೆ ಕಾರ್ಯನಿರ್ವಹಿಸುತ್ತಿರುವ ನೌಕರರ ಸಂಚಿತ ವೇತನವನ್ನು ಮೇಲೆ ಕ್ರಮ ಸಂಖ್ಯೆ (4)ರಲ್ಲಿ ಓದಲಾದ ಅಧಿಕೃತ ಜ್ಞಾಪನದಲ್ಲಿ ಪರಿಷ್ಕರಿಸಲಾಗಿರುತ್ತದೆ. **ಶ್ರೀ ಸಚಿನ್ ಕುಮಾರ್ ಟಿ.ಎಸ್, ಕೆಹೆಚ್‌ಬಿ 13/ಬಿ, ಜಜೆ ಕಾಲೋನಿ, ಭದ್ರಾವತಿ ತಾಲ್ಲೂಕು, ಶಿವಮೊಗ್ಗ ಜಿಲ್ಲೆ** ಇವರನ್ನು ಗುತ್ತಿಗೆ ಆಧಾರದ ಮೇಲೆ ಖಾಲಿಯಿರುವ ಆಪ್ತ ಸಹಾಯಕ ಹುದ್ದೆಗೆ ನೇಮಕಾತಿ ಮಾಡುವಂತೆ ಮಾನ್ಯ ಉಪಾಧ್ಯಕ್ಷರು, ರಾಜ್ಯ ಯೋಜನಾ ಮಂಡಳಿ ರವರು ಮೇಲೆ ಕ್ರಮ ಸಂಖ್ಯೆ (5) ರಲ್ಲಿ ಓದಲಾದ ಟಿಪ್ಪಣಿಯಲ್ಲಿ ಸೂಚಿಸಿರುತ್ತಾರೆ. ಅದರಂತೆ ಆದೇಶ

## ಸರ್ಕಾರಿ ಆದೇಶ ಸಂಖ್ಯೆ:ಸಿಆಸುಇ 112 ಎಸ್‌ಟಿಟಿ 2016 ಬೆಂಗಳೂರು, ದಿನಾಂಕ:26ನೇ ನವೆಂಬರ್ 2016.

ಮೇಲ್ಕಂಡ ವಿಷಯವನ್ನು ಪರಿಶೀಲಿಸಿದ ಸರ್ಕಾರವು, **ಶ್ರೀ ಸಚಿನ್ ಕುಮಾರ್ ಟಿ.ಎಸ್. ಕೆಹೆಚ್‌ಬಿ 13/ಬಿ, ಜಜೆ ಕಾಲೋನಿ, ಭದ್ರಾವತಿ ತಾಲ್ಲೂಕು, ಶಿವಮೊಗ್ಗ ಜಿಲ್ಲೆ** ಇವರನ್ನು ರಾಜ್ಯ ಯೋಜನಾ ಮಂಡಳಿಯ ಉಪಾಧ್ಯಕ್ಷರ ಆಪ್ತ ಶಾಖೆಯಲ್ಲಿ ಖಾಲಿಯಿರುವ ಆಪ್ತ ಸಹಾಯಕ ಹುದ್ದೆಗೆ (ಗ್ರೂಪ್ – ಸಿ) ಗುತ್ತಿಗೆ ಆಧಾರದ ಮೇಲೆ (ತಾತ್ಕಾಲಿಕ) ದಿನಾಂಕ:29.09.2016 ರಿಂದ ಜಾರಿಗೆ ಬರುವಂತೆ ನೇಮಕ ಮಾಡಲಾಗಿದೆ.

ಈ ಒಪ್ಪಂದದ ನೇಮಕಾತಿಯು ಕೆಳಕಂಡ ನಿಬಂಧನೆ ಹಾಗೂ ಷರತ್ತುಗಳಿಗೆ ಒಳಪಟ್ಟಿರುತ್ತದೆ.

1 ಶ್ರೀ ಸಚಿನ್ ಕುಮಾರ್ ಟಿ.ಎಸ್ ಇವರ ಗುತ್ತಿಗೆ ನೇಮಕಾತಿ ಅವಧಿಯು ದಿನಾಂಕ:29.09.2016 ರಿಂದ ಒಂದು ವರ್ಷದ ವರೆಗೆ ಅಥವಾ ಮಾನ್ಯ ಉಪಾಧ್ಯಕ್ಷರ ಅವಧಿ ಅಥವಾ ಮುಂದಿನ ಆದೇಶ ಹೊರಡಿಸುವವರೆಗೆ ಇವರಲ್ಲಿ ಯಾವುದು ಮೊದಲೋ ಅಲ್ಲಿಯವರೆಗೆ ಮಾತ್ರ ಇದ್ದು ಇದೊಂದು ತಾತ್ಕಾಲಿಕ ನೇಮಕಾತಿ ಆಗಿರುತ್ತದೆ.

2. ಇವರ ಗುತ್ತಿಗೆ ನೇಮಕಾತಿಗೆ ಮಾಸಿಕ ರೂ.16,000/- (ಹದಿನಾರು ಸಾವಿರ ರೂಪಾಯಿಗಳು ಮಾತ್ರ) ಕ್ರೋಢೀಕೃತ (ಸಂಚಿತ) ವೇತನವನ್ನು ನಿಗಧಿಪಡಿಸಲಾಗಿದೆ. <u>ಇದಲ್ಲದೆ ಇನ್ನಿತರ ಯಾವುದೇ ಭತ್ಯೆಗಳಿಗೂ ಇವರು ಅರ್ಹರಾಗಿರುವುದಿಲ್ಲ.</u>

3. ಇವರು ಸಾರ್ವಜನಿಕ ಹಿತ ದೃಷ್ಟಿಯಿಂದ ಪ್ರಯಾಣ ಮಾಡಬೇಕಾದಲ್ಲಿ ಮಾತ್ರ ಇವರ ನೇಮಕಾತಿ ಹೊಂದಿರುವ ಹುದ್ದೆಯ ಕಾಲಿಕ ವೇತನ ಶ್ರೇಣಿಯ ಕನಿಷ್ಠ ವೇತನದ ಮೇಲೆ ನಿಯಮಾನುಸಾರ ಲಭ್ಯವಿರುವ ಪ್ರಯಾಣ ಭತ್ಯೆ ಮತ್ತು ದಿನ ಭತ್ಯೆಯನ್ನು ಪಡೆಯಲು ಅರ್ಹರಾಗಿರುತ್ತಾರೆ.

4. ಸದರಿ ಗುತ್ತಿಗೆ ನೌಕರರು ವಾರ್ಷಿಕ 15 ದಿನಗಳ ಸಾಂದರ್ಭಿಕ ರಜೆಯನ್ನು ಮಾತ್ರ ಪಡೆಯಲು ಅರ್ಹರಾಗಿರುತ್ತಾರೆ.

5. ಸಕ್ಷಮ ಪ್ರಾಧಿಕಾರದ ಅನುಮತಿ ಪಡೆಯದೆ ವೈದ್ಯಕೀಯ ಕಾರಣಗಳ ಮೇರೆಗಾಗಲಿ ಅಥವಾ ಬೇರೆ ಕಾರಣಗಳಿಂದಾಗಲೀ ಅನಧಿಕೃತ ಗೈರು ಹಾಜರಾದಲ್ಲಿ ಗುತ್ತಿಗೆ ಆಧಾರದ ನೇಮಕಾತಿಯು ತಾನಾಗಿಯೇ ರದ್ದಾಗುತ್ತದೆ.

6. ಸಕ್ಷಮ ಪ್ರಾಧಿಕಾರದ ಪೂರ್ವಾನುಮತಿ ಪಡೆದು ವೈದ್ಯಕೀಯ ಕಾರಣಗಳ ಮೇರೆಗಾಗಲಿ ಅಥವಾ ಸಮರ್ಥ ಕಾರಣಗಳ ಮೇರೆಗೆ ಗುತ್ತಿಗೆ ಆಧಾರದ ಅವಧಿಯಲ್ಲಿ ಮೂರು ತಿಂಗಳಿಗೆ ಮೀರದಂತೆ, ಗೈರು ಹಾಜರಾದಲ್ಲಿ ಆ ಕಾರಣದಿಂದ ಗುತ್ತಿಗೆ ನೇಮಕಾತಿ ರದ್ದಾಗುವುದಿಲ್ಲ. ಆದರೆ ಈ ಅವಧಿಯಲ್ಲಿ ಕರ್ತವ್ಯ ರಹಿತ ದಿನಗಳೆಂದು (ಡೈಸ್ ನಾನ್) ಪರಿಗಣಿಸಲಾಗುವುದು ಮತ್ತು ಅವರು ಈ ಅವಧಿಗೆ ಯಾವುದೇ ವೇತನ ಮತ್ತು ಇತರೆ ಸೌಲಭ್ಯಗಳಿಗೆ ಅರ್ಹರಿರುವುದಿಲ್ಲ.

7. ಗುತ್ತಿಗೆ ಷರತ್ತು ಮತ್ತು ನಿಬಂಧನೆಗಳಲ್ಲಿ ನೀಡಿರುವ ಸೌಲಭ್ಯಗಳ ಹೊರತಾಗಿ ಬೇರಾವುದೇ ಸೌಲಭ್ಯಕ್ಕೆ ಅಂದರೆ ವೇತನ ಬಡ್ತಿ, ಪದೋನ್ನತಿ, ಪಿಂಚಣಿ ಇತ್ಯಾದಿ ಸೌಲಭ್ಯಗಳಿಗೆ ಸದರಿ ಗುತ್ತಿಗೆ ನೌಕರರು ಅರ್ಹರಾಗಿರುವುದಿಲ್ಲ.

8. ಸದರಿ ನೌಕರರ ದುರ್ವರ್ತನೆ, ನಿರ್ಲಕ್ಷತೆ, ದುರ್ನಡತೆಯಿಂದ ಸರ್ಕಾರಕ್ಕೆ ಸಂಭವಿಸಬಹುದಾದ ಎಲ್ಲಾ ನಷ್ಟಗಳನ್ನು ಸರ್ಕಾರಕ್ಕೆ ಸದರಿ ನೌಕರರು ಭರಿಸಿಕೊಡಲು ಬದ್ಧರಾಗಿರತಕ್ಕದ್ದು.

9. ಸದರಿ ಗುತ್ತಿಗೆ ನೇಮಕಾತಿಯನ್ನು ಯಾವುದೇ ಕಾರಣಕ್ಕೂ ಖಾಯಂ ಎಂದು ಪರಿಗಣಿಸಲಾಗುವುದಿಲ್ಲ.

10. ಇವರು ತಮ್ಮ ಕರ್ತವ್ಯ, ಕಾರ್ಯ, ಪ್ರಕ್ರಿಯೆಗಳನ್ನು ಶ್ರದ್ಧೆ, ಭಕ್ತಿ ಮತ್ತು ಆಸಕ್ತಿಯಿಂದ ನಿರ್ವಹಿಸತಕ್ಕದ್ದು.

11. ಇವರು ತಮ್ಮ ಕರ್ತವ್ಯವನ್ನು ಪಾಲಿಸುತ್ತಿರುವಾಗ ಅಥವಾ ನೆರವೇರಿಸುತ್ತಿರುವಾಗ ಲಭ್ಯವಾಗಬಹುದಾದ ಅಥವಾ ದೊರಕಬಹುದಾದ ಅಧಿಕೃತ ಮಾಹಿತಿಯನ್ನು ಗೌಪ್ಯವಾಗಿಟ್ಟು ಕಟ್ಟುನಿಟ್ಟಾಗಿ ಪಾಲಿಸತಕ್ಕದ್ದು.

12. ಇವರು 1966ರ ಕರ್ನಾಟಕ ನಾಗರಿಕ ಸೇವಾ(ನಡತೆ) ನಿಯಮಾವಳಿಗಳು ಮತ್ತು 1957ರ ಕರ್ನಾಟಕ ನಾಗರಿಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಾವಳಿಗೆ ಬದ್ಧರಾಗಿರತಕ್ಕದ್ದು.

13. ಈ ಗುತ್ತಿಗೆ ಷರತ್ತುಗಳನ್ನು ಉಲ್ಲಂಘಿಸಿದಲ್ಲಿ ಗುತ್ತಿಗೆ ನೇಮಕಾತಿಯು ತಾನಾಗಿಯೇ ಮುಕ್ತಾಯವಾಗುತ್ತದೆ.

14. ಈ ಆದೇಶವನ್ನು ಸ್ವೀಕರಿಸಿದ ದಿನಾಂಕದಿಂದ ಏಳು ದಿನಗಳೊಳಗಾಗಿ ರೂ.50/- (ಐವತ್ತು ರೂಪಾಯಿಗಳು) ಗಳ ಮೌಲ್ಯದ ಛಾಪಾ ಕಾಗದದಲ್ಲಿ ಸದರಿ ನೇಮಕಾತಿಯ ಷರತ್ತು ಮತ್ತು ನಿಬಂಧನೆಗಳನ್ನು ಒಳಗೊಂಡಿರುವ ಕರಾರು ಪತ್ರವನ್ನು ಕ್ರಮಬದ್ಧ ರೀತಿಯಲ್ಲಿ ಸದರಿ ನೌಕರರು ತಮ್ಮ ಒಪ್ಪಿಗೆಯನ್ನು ನಮೂದಿಸಿ ಸಲ್ಲಿಸತಕ್ಕದ್ದು ಹಾಗೂ ವಿದ್ಯಾರ್ಹತೆಯ ಮೂಲ ಪ್ರತಿಗಳನ್ನು ಸಲ್ಲಿಸತಕ್ಕದ್ದು.

15. ಆದೇಶ ಸಂಖ್ಯೆ:ಪಿಡಿ 72 ಎಸ್‌ಟಿಐ 2016, ದಿನಾಂಕ:16.08.2016 ರಲ್ಲಿ ಸಂಶೋಧನಾ ಸಮಾಲೋಚಕರು, ರಾಜ್ಯ ಯೋಜನಾ ಮಂಡಳಿಯವರಿಗೆ ನೀಡಲಾದ ಅಧಿಕಾರ ಪ್ರತ್ಯಾಯೋಜನೆಯನ್ವಯ ಈ ಆದೇಶವನ್ನು ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

(ಎಸ್. ಪಾರ್ವತಿ)
ಸರ್ಕಾರದ ಅಧೀನ ಕಾರ್ಯದರ್ಶಿ-3(ಪ್ರ)
ಯೋಜನೆ, ಕಾರ್ಯಕ್ರಮ ಸಂಯೋಜನೆ
ಮತ್ತು ಸಾಂಖ್ಯಿಕ ಇಲಾಖೆ.
ದಿ:22032024

ಪ್ರತಿ:

1 ಪ್ರಧಾನ ಮಹಾಲೇಖಪಾಲರು (ಜಿ & ಎಸ್ ಎಸ್ ಎ), ಕರ್ನಾಟಕ, ಪೋಡ್ ಕಟ್ಟಡ, ಆಡಿಟ್ ಭವನ, ಅಂಚೆ ಪೆಟ್ಟಿಗೆ ಸಂಖ್ಯೆ:5398, ಬೆಂಗಳೂರು-01.
2 ಮಾನ್ಯ ಉಪಾಧ್ಯಕ್ಷರ ಆಪ್ತ ಕಾರ್ಯದರ್ಶಿ, ರಾಜ್ಯ ಯೋಜನಾ ಮಂಡಳಿ, ವಿಕಾಸ ಸೌಧ, ಬೆಂಗಳೂರು.
3 ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ, ಯೋಜನೆ, ಕಾರ್ಯಕ್ರಮ ಸಂಯೋಜನೆ ಮತ್ತು ಸಾಂಖ್ಯಿಕ ಇಲಾಖೆ ಹಾಗೂ ಕಾರ್ಯದರ್ಶಿ, ರಾಜ್ಯ ಯೋಜನಾ ಮಂಡಳಿ ಬಹುಮಹಡಿ ಕಟ್ಟಡ, ಬೆಂಗಳೂರು.
4 ಸರ್ಕಾರದ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ, ಯೋಜನೆ, ಕಾರ್ಯಕ್ರಮ ಸಂಯೋಜನೆ ಮತ್ತು ಸಾಂಖ್ಯಿಕ ಇಲಾಖೆ ಹಾಗೂ ಸಂಶೋಧನಾ ಸಮಾಲೋಚಕರು, ರಾಜ್ಯ ಯೋಜನಾ ಮಂಡಳಿ, ಬಹುಮಹಡಿ ಕಟ್ಟಡ, ಬೆಂಗಳೂರು.
5 ಸರ್ಕಾರದ ಉಪ ಕಾರ್ಯದರ್ಶಿ (ಆಡಳಿತ), ಯೋಜನೆ, ಕಾರ್ಯಕ್ರಮ ಸಂಯೋಜನೆ ಮತ್ತು ಸಾಂಖ್ಯಿಕ ಇಲಾಖೆ.
6 ಜಂಟಿ ನಿರ್ದೇಶಕರು, ರಾಜ್ಯ ಹುಜೂರ್ ಖಜಾನೆ, ಬೆಂಗಳೂರು.
7 ಸರ್ಕಾರದ ಅಧೀನ ಕಾರ್ಯದರ್ಶಿ, ಆರ್ಥಿಕ ಇಲಾಖೆ (ವೆಚ್ಚ-6) ವಿಧಾನ ಸೌಧ.
8 ಸರ್ಕಾರದ ಅಧೀನ ಕಾರ್ಯದರ್ಶಿ, ಎಸ್-1 & 2 ಯೋಜನೆ, ಕಾರ್ಯಕ್ರಮ, ಸಂಯೋಜನೆ ಮತ್ತು ಸಾಂಖ್ಯಿಕ ಇಲಾಖೆ, ಬಹುಮಹಡಿ ಕಟ್ಟಡ, ಬೆಂಗಳೂರು-01.ಕಾಂಪೆಂಡಿಯಂಗಾಗಿ.
9 ಶ್ರೀ ಸಚಿನ್ ಕುಮಾರ್ ಜಿ.ಎಸ್., ಕೆಹೆಚ್‌ಬಿ 13/ಜಿ, ಜಿಜೆ ಕಾಲೋನಿ, ಭದ್ರಾವತಿ ತಾಲ್ಲೂಕು, ಶಿವಮೊಗ್ಗ ಜಿಲ್ಲೆ. ಇವರು ಈ ಕಚೇರಿಗೆ ಹಾಜರಾಗಲು ಬರುವ ವಿದ್ಯಾರ್ಹತೆಯ ಮೂಲ ಪ್ರತಿಗಳನ್ನು ಶಾಖೆಯಲ್ಲಿ ತೋರಿಸುವಂತೆ ಸೂಚಿಸಿದೆ.
10 ಸಹಾಯಕ ಆಡಳಿತಾಧಿಕಾರಿ, ಯೋಜನಾ ಇಲಾಖೆ, ಎಸ್-3.
11 ಶಾಖಾ ರಕ್ಷಾ ಕಡತ ಹಾಗೂ ಹೆಚ್ಚುವರಿ ಪ್ರತಿಗಳು.